KARNATAK UNIVERSITY, DHARWAD
ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ
Examination G.A.D. Section
ಪರೀಕ್ಷಾ ಸಾಮಾನ್ಯ ಆಡಳಿತ ವಿಭಾಗ
"NAAC Accredited with "A" Grade 2022"

Pavate Nagar, Dharwad
ಪಾವಟೆನಗರ, ಧಾರವಾಡ

Fax No. 0837-2741928
Tel Ph No. 0836-2215267
Website : www.kud.ac.in

ನಂ:/ಕವಿವಿ/ಪರೀಕ್ಷಾ/ಜಿಎಡಿ/2024/1270 ದಿನಾಂಕ:10/01/2024

## ಪರಿಷ್ಕೃತ ಸುತ್ತೋಲೆ

ವಿಷಯ : ಜನೇವರಿ/ಫೆಬ್ರುವರಿ–2024 ರಲ್ಲಿ ಜರಗುವ ರಾಷ್ಟ್ರೀಯ ಶಿಕ್ಷಣ ನೀತಿ–2020 (NEP) ಅಡಿಯಲ್ಲಿ ಎಲ್ಲ ಸ್ನಾತಕ ಪದವಿಗಳ 1, 3 ಮತ್ತು 5 ನೇ ಸೆಮೆಸ್ಟರ್‌ನ ವಿದ್ಯಾರ್ಥಿಗಳಿಗೆ ಪರೀಕ್ಷಾ ಫಾರ್ಮ/ಶುಲ್ಕ ತುಂಬುವ ಅವಧಿ ವಿಸ್ತರಿಸುವ ಕುರಿತು.

ಉಲ್ಲೇಖ : 1) ತಿದ್ದುಪಡಿ ಅಧಿಸೂಚನೆ.ನಂ/ಕವಿವಿ/ಪರೀಕ್ಷಾ/ಜಿಎಡಿ/2023/1213, ದಿನಾಂಕ:19/12/2023.
2) ಪರಿಷ್ಕೃತ ಸುತ್ತೋಲೆ ನಂ.ಕವಿವಿ/ಪರೀಕ್ಷಾ/ಜಿಎಡಿ/2023/1235, ದಿನಾಂಕ:29/12/2023.
3) ಪರಿಷ್ಕೃತ ಸುತ್ತೋಲೆ ನಂ.ಕವಿವಿ/ಪರೀಕ್ಷಾ/ಜಿಎಡಿ/2023/1260, ದಿನಾಂಕ:08/01/2024.
4) ಸುತ್ತೋಲೆ ನಂ.ಕವಿವಿ/ಪರೀಕ್ಷಾ/ಜಿಎಡಿ/2023/1265, ದಿನಾಂಕ:09/01/2024.
5) ಸುತ್ತೋಲೆ. ನಂ:/ಕವಿವಿ/ಪರೀಕ್ಷಾ/ಜಿಎಡಿ/2024/1269 ದಿನಾಂಕ:10/01/2024.

** **

ಮೇಲ್ಕಾಣಿಸಿದ ವಿಷಯ ಹಾಗೂ ಉಲ್ಲೇಖಗಳನ್ನು ಮುಂದುವರೆಸುತ್ತಾ, ಕರ್ನಾಟಕ ವಿಶ್ವವಿದ್ಯಾಲಯದ ವ್ಯಾಪ್ತಿಯ ಎಲ್ಲ ಅಧೀನ ಹಾಗೂ ಸಂಲಗ್ನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳಿಗೆ ಈ ಮೂಲಕ ತಿಳಿಸುವುದೇನೆಂದರೆ, ಯು.ಯು.ಸಿ.ಎಂ.ಎಸ್. ತಂತ್ರಾಂಶದ ತಾಂತ್ರಿಕ ಕಾರಣಗಳಿಂದಾಗಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಪರೀಕ್ಷಾ ಫಾರ್ಮ/ಶುಲ್ಕ ತುಂಬುವ ಅವಧಿಯನ್ನು ಈ ಕೆಳಗಿನಂತೆ ವಿಸ್ತರಿಸಲಾಗಿದೆ.

1) ವಿದ್ಯಾರ್ಥಿಗಳು ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕವನ್ನು ಭರಿಸಿ ದಂಡವಿಲ್ಲದೆ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**14/01/2024.**
2) ವಿದ್ಯಾರ್ಥಿಗಳು ರೂ.**180/–** ಮೊದಲನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕ ಭರಿಸಿ ಅರ್ಜಿ ಸಲ್ಲಿಸಲು ಕೊನೆಯ ದಿನಾಂಕ:**15/01/2024.**
3) ವಿದ್ಯಾರ್ಥಿಗಳು ರೂ.**200/–** ಎರಡನೆಯ ದಂಡದೊಂದಿಗೆ ಪರೀಕ್ಷಾ ಅರ್ಜಿಯನ್ನು **UUCMS** ತಂತ್ರಾಂಶದ ಮೂಲಕ ಪರೀಕ್ಷಾ ಶುಲ್ಕ ಭರಿಸಿ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕ:**16/01/2024.**
4) ಪ್ರಾಚಾರ್ಯರು ತಮ್ಮ ಮಹಾವಿದ್ಯಾಲಯದ ವಿದ್ಯಾರ್ಥಿಗಳು **UUCMS** ತಂತ್ರಾಂಶದ ಮೂಲಕ ಭರ್ತಿ ಮಾಡಿದ ಪರೀಕ್ಷಾ ಅರ್ಜಿ/ಶುಲ್ಕದ ವಿವರಗಳನ್ನು ಪರಿಶೀಲಿಸಿ ಯಾದಿಯನ್ನು ದಿನಾಂಕ:**17/01/2024** ರ ಒಳಗಾಗಿ ವಿಶ್ವವಿದ್ಯಾಲಯಕ್ಕ ಸಲ್ಲಿಸುವುದು.

**ಮುಂದುವರೆದು, ಅಂತರ ಮಹಾವಿದ್ಯಾಲಯ ಬದಲಾವಣೆ ಮಾಡಿಕೊಂಡ ವಿದ್ಯಾರ್ಥಿಗಳ ಪರೀಕ್ಷಾ ಫಲಿತಾಂಶ ಪ್ರಕಟವಾಗದ ಹಿನ್ನಲೆಯಲ್ಲಿ ಹಾಗೂ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಅಂತಹ ವಿದ್ಯಾರ್ಥಿಗಳು ಮಾತ್ರ ಪರೀಕ್ಷಾ ಫಾರ್ಮ/ಶುಲ್ಕವನ್ನು SBI Online Portal ಮುಖಾಂತರ ಮೇಲೆ ನಮೂದಿಸಿದ ದಿನಾಂಕದೊಳಗಾಗಿ ಭರಿಸಲು ತಿಳಿಸಲಾಗಿದೆ. ಮಹಾವಿದ್ಯಾಲಯದವರು ಸದರಿ ವಿದ್ಯಾರ್ಥಿಗಳು ಭರಿಸಿದ ಪರೀಕ್ಷಾ ಫಾರ್ಮ/ಶುಲ್ಕವನ್ನು ಪರಿಶೀಲಿಸಿ ವಿಶ್ವವಿದ್ಯಾಲಯಕ್ಕೆ ಶುಲ್ಕವನ್ನು ದಿನಾಂಕ:16/01/2024 ರ ಒಳಗಾಗಿ ಭರಿಸುವುದು. ಹಾಗೂ ಸದರಿ ವಿದ್ಯಾರ್ಥಿಗಳ ಪರೀಕ್ಷಾ ಅರ್ಜಿಗಳನ್ನು ಯಾದಿಯೊಂದಿಗೆ ದಿನಾಂಕ:17/01/2024 ರ ಒಳಗಾಗಿ ಸಂಬಂಧಪಟ್ಟ ವಿಭಾಗದ ಅಧೀಕ್ಷಕರು, ಪರೀಕ್ಷಾ ವಿಭಾಗ, ಕ.ವಿ.ವಿ.ಧಾರವಾಡ ಇವರಿಗೆ ಸಲ್ಲಿಸುವುದು.**

ಸದರ ಪರಿಷ್ಕೃತ ಸುತ್ತೋಲೆಯನ್ನು ಎಲ್ಲ ವಿದ್ಯಾರ್ಥಿಗಳ ಗಮನಕ್ಕೆ ತಂದು ಅದರಂತೆ ಪರೀಕ್ಷಾ ಫಾರ್ಮ/ ಶುಲ್ಕಗಳನ್ನು ಭರಿಸಿಕೊಳ್ಳುವುದು.

Registrar (Evaluation)

ಗೆ,
ಕರ್ನಾಟಕ ವಿಶ್ವವಿದ್ಯಾಲಯ ವ್ಯಾಪ್ತಿಯ ಎಲ್ಲ ಸಂಲಗ್ನ ಹಾಗೂ ಅಧೀನ ಮಹಾವಿದ್ಯಾಲಯಗಳ ಪ್ರಾಚಾರ್ಯರುಗಳು.

ಪ್ರತಿ ಮಾಹಿತಿಗಾಗಿ ಹಾಗೂ ಮುಂದಿನ ಕ್ರಮಕ್ಕಾಗಿ:

1. ಸಿಸ್ಟಮ್ ಎನಾಲಿಸ್ಟ್, ಗಣಕಯಂತ್ರ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
2. ನಿರ್ದೇಶಕರು ಮಾಹಿತಿ ತಂತ್ರಜ್ಞಾನ ವಿಭಾಗ ಕ.ವಿ.ವಿ. ಧಾರವಾಡ. (ಅಂತರ್ಜಾಲದಲ್ಲಿ ಪ್ರಕಟಿಸುವುದು)
3. ಕುಲಪತಿಗಳ, ಕುಲಸಚಿವರ, ಕುಲಸಚಿವರು(ಮೌಲ್ಯಮಾಪನ), ವಿತ್ತಾಧಿಕಾರಿಗಳು ಆಪ್ತ ಕಾರ್ಯದರ್ಶಿಗಳು, ಕ.ವಿ.ವಿ ಧಾರವಾಡ.
4. ಉಪಕುಲಸಚಿವರು / ಸಹಾಯಕ ಕುಲಸಚಿವರು, ಪರೀಕ್ಷಾ ವಿಭಾಗ, ಕರ್ನಾಟಕ ವಿಶ್ವವಿದ್ಯಾಲಯ, ಧಾರವಾಡ.
5. ಎಲ್ಲ ಅಧೀಕ್ಷಕರುಗಳಿಗೆ, ಪರೀಕ್ಷಾ ವಿಭಾಗ, ಕ.ವಿ.ವಿ. ಧಾರವಾಡ.